**ಕರ್ನಾಟಕ ಸರ್ಕಾರದ ನಡವಳಿಗಳು**

**ವಿಷಯ:-** ರಾಜ್ಯದ ಎಲ್ಲಾ ಮಹಿಳಾ ಪ್ರಯಾಣಿಕರಿಗೆ ರಾಜ್ಯ ರಸ್ತೆ ಸಾರಿಗೆ ಸಂಸ್ಥೆಗಳ ಬಸ್ಸುಗಳಲ್ಲಿ ಉಚಿತ ಪ್ರಯಾಣ ಸೌಲಭ್ಯ ಒದಗಿಸುವ "ಶಕ್ತಿ ಯೋಜನೆ"ಯನ್ನು ಜಾರಿಗೊಳಿಸಲು ಆಡಳಿತಾತ್ಮಕ ಅನುಮೋದನೆ ನೀಡುವ ಬಗ್ಗೆ.

**ಓದಲಾಗಿದೆ:-** ಸರ್ಕಾರದ ಆದೇಶ ಸಂಖ್ಯೆ: ಟಿಡಿ 18 ಟಿಸಿಬಿ 2023, ದಿನಾಂಕ:20.05.2023

*********

**ಪ್ರಸ್ತಾವನೆ:-**

ಮೇಲೆ ಓದಲಾದ ಸರ್ಕಾರದ ಆದೇಶದಲ್ಲಿ ರಾಜ್ಯ ಸರ್ಕಾರದ "ಶಕ್ತಿ ಯೋಜನೆ"ಯಡಿ ರಾಜ್ಯದ ಎಲ್ಲಾ ಮಹಿಳೆಯರು ನಾಲ್ಕು ಸಾರಿಗೆ ಸಂಸ್ಥೆಗಳಾದ ಕರ್ನಾಟಕ ರಾಜ್ಯ ರಸ್ತೆ ಸಾರಿಗೆ ನಿಗಮ (ಕ.ರಾ.ರ.ಸಾ.ನಿಗಮ), ಬೆಂಗಳೂರು ಮಹಾನಗರ ಸಾರಿಗೆ ಸಂಸ್ಥೆ (ಬೆಂ.ಮ.ಸಾ.ಸಂಸ್ಥೆ), ವಾಯುವ್ಯ ಕರ್ನಾಟಕ ರಸ್ತೆ ಸಾರಿಗೆ ಸಂಸ್ಥೆ (ವಾ.ಕ.ರ.ಸಾ.ಸಂಸ್ಥೆ) ಮತ್ತು ಕಲ್ಯಾಣ ಕರ್ನಾಟಕ ರಸ್ತೆ ಸಾರಿಗೆ ನಿಗಮಗಳ (ಕ.ಕ.ರ.ಸಾ.ನಿಗಮ) ಸಾಮಾನ್ಯ ಬಸ್ಸುಗಳಲ್ಲಿ ಉಚಿತವಾಗಿ ಪ್ರಯಾಣಿಸುವ ಸೌಲಭ್ಯ ಒದಗಿಸಲು ತಾತ್ವಿಕ ಅನುಮೋದನೆ ನೀಡಿ ಆದೇಶಿಸಲಾಗಿದೆ.

ಪ್ರಸ್ತುತ ರಾಜ್ಯ ಸರ್ಕಾರದ "ಶಕ್ತಿ ಯೋಜನೆ"ಯಡಿ ರಾಜ್ಯದ ಎಲ್ಲಾ ಮಹಿಳೆಯರು (ವಿದ್ಯಾರ್ಥಿನಿಯರು ಸೇರಿದಂತೆ) ಮತ್ತು ಲಿಂಗತ್ವ ಅಲ್ಪಸಂಖ್ಯಾತರು ನಗರ, ಸಾಮಾನ್ಯ ಮತ್ತು ವೇಗದೂತ ಸಾರಿಗೆಗಳಲ್ಲಿ (ಎ.ಸಿ. ಬಸ್ ಮತ್ತು ಐಷಾರಾಮಿ (Luxury) ಬಸ್‌ಗಳನ್ನು ಹೊರತುಪಡಿಸಿ) ಉಚಿತವಾಗಿ ಪ್ರಯಾಣಿಸಲು ಅವಕಾಶ ನೀಡುವ ಬಗ್ಗೆ ಪರಿಶೀಲಿಸಿ, ಸರ್ಕಾರವು ಈ ಕೆಳಕಂಡಂತೆ ಆದೇಶಿಸಿದೆ.

**<u>ಸರ್ಕಾರದ ಆದೇಶ ಸಂಖ್ಯೆ: ಟಿಡಿ 18 ಟಿಸಿಬಿ 2023, ಬೆಂಗಳೂರು, ದಿನಾಂಕ: 05.06.2023</u>**

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ, ರಾಜ್ಯದ ನಾಲ್ಕು ಸಾರಿಗೆ ಸಂಸ್ಥೆಗಳಾದ ಕರ್ನಾಟಕ ರಾಜ್ಯ ರಸ್ತೆ ಸಾರಿಗೆ ನಿಗಮ (ಕ.ರಾ.ರ.ಸಾ.ನಿಗಮ), ಬೆಂಗಳೂರು ಮಹಾನಗರ ಸಾರಿಗೆ ಸಂಸ್ಥೆ (ಬೆಂ.ಮ.ಸಾ.ಸಂಸ್ಥೆ), ವಾಯುವ್ಯ ಕರ್ನಾಟಕ ರಸ್ತೆ ಸಾರಿಗೆ ಸಂಸ್ಥೆ (ವಾ.ಕ.ರ.ಸಾ.ಸಂಸ್ಥೆ) ಮತ್ತು ಕಲ್ಯಾಣ ಕರ್ನಾಟಕ ರಸ್ತೆ ಸಾರಿಗೆ ನಿಗಮಗಳ (ಕ.ಕ.ರ.ಸಾ.ನಿಗಮ) ಸಾರಿಗೆಗಳಲ್ಲಿ ಕರ್ನಾಟಕ ರಾಜ್ಯಾದ್ಯಂತ ನಗರ, ಸಾಮಾನ್ಯ ಹಾಗೂ ವೇಗದೂತ (Express) ಬಸ್ಸುಗಳಲ್ಲಿ ಕರ್ನಾಟಕ ರಾಜ್ಯದ (Domicile of Karnataka) ಎಲ್ಲಾ ಮಹಿಳೆಯರು (ವಿದ್ಯಾರ್ಥಿನಿಯರು ಸೇರಿದಂತೆ) ಮತ್ತು ಲಿಂಗತ್ವ ಅಲ್ಪಸಂಖ್ಯಾತರು ಉಚಿತವಾಗಿ ಪ್ರಯಾಣಿಸಲು ಈ ಕೆಳಕಂಡ ಷರತ್ತುಗಳೊಂದಿಗೆ ದಿನಾಂಕ:11.06.2023ರಿಂದ **"ಶಕ್ತಿ ಯೋಜನೆ"**ಯನ್ನು ಜಾರಿಗೊಳಿಸಲು ಆಡಳಿತಾತ್ಮಕ ಅನುಮೋದನೆ ನೀಡಿ ಆದೇಶಿಸಿದೆ.

i. ರಾಜ್ಯದೊಳಗಿನ ಪ್ರಯಾಣಕ್ಕೆ ಮಾತ್ರ (ಎಲ್ಲಾ ಅಂತರ ರಾಜ್ಯ ಸಾರಿಗೆ ಅನುಸೂಚಿಗಳನ್ನು ಹೊರತುಪಡಿಸಿ) ಈ ಯೋಜನೆಯು ಅನ್ವಯಿಸತಕ್ಕದ್ದು.

ii. ಐಷಾರಾಮಿ (Luxury) ಬಸ್‌ಗಳಾದ ರಾಜಹಂಸ, ನಾನ್-ಎ.ಸಿ. ಸ್ಲೀಪರ್ ಹಾಗೂ ವಜ್ರ, ವಾಯುವಜ್ರ, ಐರಾವತ, ಐರಾವತ ಕ್ಲಬ್ ಕ್ಲಾಸ್, ಐರಾವತ ಗೋಲ್ಡ್ ಕ್ಲಾಸ್, ಅಂಬಾರಿ, ಅಂಬಾರಿ ಡ್ರೀಮ್ ಕ್ಲಾಸ್, ಅಂಬಾರಿ ಉತ್ಸವ್, ಫ್ಲೈ ಬಸ್, ಇವಿ ಪವರ್ ಪ್ಲಸ್ (ಎ.ಸಿ. ಬಸ್‌ಗಳು) ಇವುಗಳಿಗೆ ಈ ಯೋಜನೆಯು ಅನ್ವಯಿಸುವುದಿಲ್ಲ.

iii. ಬೆಂಗಳೂರು ಮಹಾನಗರ ಸಾರಿಗೆ ಸಂಸ್ಥೆಯ ಬಸ್ಸುಗಳನ್ನು ಹೊರತುಪಡಿಸಿ, ಉಳಿದ ರಸ್ತೆ ಸಾರಿಗೆ ಸಂಸ್ಥೆಗಳಾದ ಕರ್ನಾಟಕ ರಾಜ್ಯ ರಸ್ತೆ ಸಾರಿಗೆ ನಿಗಮ, ವಾಯುವ್ಯ ಕರ್ನಾಟಕ ರಸ್ತೆ ಸಾರಿಗೆ ಸಂಸ್ಥೆ ಮತ್ತು ಕಲ್ಯಾಣ ಕರ್ನಾಟಕ ರಸ್ತೆ ಸಾರಿಗೆ ನಿಗಮಗಳ ಎಲ್ಲಾ ಬಸ್‌ಗಳಲ್ಲಿ (ಅಂತರರಾಜ್ಯ, ಎ.ಸಿ. ಮತ್ತು ಐಷಾರಾಮಿ (Luxury) ಬಸ್‌ಗಳನ್ನು ಹೊರತುಪಡಿಸಿ) ಶೇ.50ರಷ್ಟು ಆಸನಗಳನ್ನು ಪುರುಷರಿಗೆ ಕಾಯ್ದಿರಿಸತಕ್ಕದ್ದು.

iv. ಈ ಯೋಜನೆಯಡಿ ನಾಲ್ಕು ಸಾರಿಗೆ ಸಂಸ್ಥೆಗಳಿಗೆ ತಗಲುವ ವೆಚ್ಚವನ್ನು ಸರ್ಕಾರದಿಂದ ಶೂನ್ಯ ಟಿಕೆಟ್/ಶಕ್ತಿ ಸ್ಮಾರ್ಟ್ ಕಾರ್ಡ್ ದತ್ತಾಂಶವನ್ನು ಆಧರಿಸಿ ಭರಿಸಲಾಗುವುದು. (Reimbursement to Road Transport Corporation would be made on the basis of actual distance travelled by women passengers)

v. ಸೇವಾ ಸಿಂಧು ಮೂಲಕ ಅರ್ಜಿಗಳನ್ನು ಪಡೆದು, "ಶಕ್ತಿ ಸ್ಮಾರ್ಟ್ ಕಾರ್ಡ್"ಗಳನ್ನು ವಿತರಿಸುವ ಪ್ರಕ್ರಿಯೆಯನ್ನು ಮುಂದಿನ ಮೂರು ತಿಂಗಳೊಳಗಾಗಿ ಪೂರ್ಣಗೊಳಿಸತಕ್ಕದ್ದು.

vi. "ಶಕ್ತಿ ಸ್ಮಾರ್ಟ್ ಕಾರ್ಡ್"ನ್ನು ವಿತರಿಸುವವರೆಗೆ ಭಾರತ ಸರ್ಕಾರ/ಕರ್ನಾಟಕ ಸರ್ಕಾರದ ಇಲಾಖೆ/ಸರ್ಕಾರಿ ಸ್ವಾಮ್ಯದ ಕಛೇರಿಗಳಿಂದ ವಿತರಿಸಿರುವ ಭಾವಚಿತ್ರ ಹಾಗೂ ವಾಸದ ವಿಳಾಸವಿರುವ ಗುರುತಿನ ಚೀಟಿಗಳನ್ನು ಶೂನ್ಯ ಟಿಕೆಟ್ ವಿತರಿಸುವ ಸಂದರ್ಭದಲ್ಲಿ ಪರಿಗಣಿಸತಕ್ಕದ್ದು.

ಈ ಆದೇಶವನ್ನು ಸಚಿವ ಸಂಪುಟವು ಪ್ರಕರಣ ಸಂಖ್ಯೆ:ಸಿ:323/2023, ದಿನಾಂಕ: 02.06.2023ರಲ್ಲಿ ನೀಡಿರುವ ಅನುಮೋದನೆಯನ್ವಯ ಹೊರಡಿಸಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ

Pushpa V.S.
(ಪುಷ್ಪ ವಿ.ಎಸ್.)
ಸರ್ಕಾರದ ಅಧೀನ ಕಾರ್ಯದರ್ಶಿ,
ಸಾರಿಗೆ ಇಲಾಖೆ.

**ಇವರಿಗೆ:-**

1. ಪ್ರಧಾನ ಮಹಾಲೇಖಪಾಲರು (ಜಿ&ಎಸ್ ಎಸ್ ಎ)/ (ಇ&ಆರ್ ಎಸ್ ಎ)/(ಎ&ಇ) ಕರ್ನಾಟಕ, ಹೊಸ ಕಟ್ಟಡ, "ಆಡಿಟ್ ಭವನ" ಅಂಚೆ ಪೆಟ್ಟಿಗೆ ಸಂಖ್ಯೆ:5398, ಬೆಂಗಳೂರು.
2. ಮಾನ್ಯ ಮುಖ್ಯಮಂತ್ರಿಯವರ ಅಪರ ಮುಖ್ಯ ಕಾರ್ಯದರ್ಶಿ, ವಿಧಾನಸೌಧ, ಬೆಂಗಳೂರು.
3. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ, ಆರ್ಥಿಕ ಇಲಾಖೆ, ವಿಧಾನಸೌಧ, ಬೆಂಗಳೂರು.
4. ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ರಾಜ್ಯ ರಸ್ತೆ ಸಾರಿಗೆ ನಿಗಮ, ಬೆಂಗಳೂರು.
5. ವ್ಯವಸ್ಥಾಪಕ ನಿರ್ದೇಶಕರು, ಬೆಂಗಳೂರು ಮಹಾನಗರ ಸಾರಿಗೆ ಸಂಸ್ಥೆ, ಬೆಂಗಳೂರು.
6. ವ್ಯವಸ್ಥಾಪಕ ನಿರ್ದೇಶಕರು, ವಾಯುವ್ಯ ಕರ್ನಾಟಕ ರಸ್ತೆ ಸಾರಿಗೆ ಸಂಸ್ಥೆ, ಹುಬ್ಬಳ್ಳಿ.
7. ವ್ಯವಸ್ಥಾಪಕ ನಿರ್ದೇಶಕರು, ಕಲ್ಯಾಣ ಕರ್ನಾಟಕ ರಾಜ್ಯ ರಸ್ತೆ ಸಾರಿಗೆ ನಿಗಮ, ಕಲಬುರಗಿ.
8. ಸರ್ಕಾರದ ಜಂಟಿ ಕಾರ್ಯದರ್ಶಿ, ಸಚಿವ ಸಂಪುಟ ಶಾಖೆ, ವಿಧಾನ ಸೌಧ, ಬೆಂಗಳೂರು (ಉಲ್ಲೇಖ: ಪ್ರಕರಣ ಸಂಖ್ಯೆ: ಸಿ:323/2023, ದಿನಾಂಕ: 02.06.2023).
9. ಮಾನ್ಯ ಸಾರಿಗೆ ಮತ್ತು ಮುಜರಾಯಿ ಸಚಿವರ ಆಪ್ತ ಕಾರ್ಯದರ್ಶಿ, ವಿಧಾನಸೌಧ, ಬೆಂಗಳೂರು.
10. ಸರ್ಕಾರದ ಕಾರ್ಯದರ್ಶಿಯವರ ಪತ್ರಾಂಕಿತ ಆಪ್ತ ಸಹಾಯಕರು, ಸಾರಿಗೆ ಇಲಾಖೆ, ಬಹುಮಹಡಿಗಳ ಕಟ್ಟಡ, ಬೆಂಗಳೂರು.
11. ಸರ್ಕಾರದ ಉಪ ಕಾರ್ಯದರ್ಶಿ/ಅಧೀನ ಕಾರ್ಯದರ್ಶಿಯವರ ಆಪ್ತ ಸಹಾಯಕರು, ಸಾರಿಗೆ ಇಲಾಖೆ, ಬಹುಮಹಡಿಗಳ ಕಟ್ಟಡ, ಬೆಂಗಳೂರು.
12. ಶಾಖಾ ರಕ್ಷಾ ಕಡತ/ಹೆಚ್ಚುವರಿ ಪ್ರತಿ.